**Akashvani : Bangalore**
**Regional Bulletin In Kannada**
**31.01.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**31.01.2025 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ನಾಳೆ ಕೇಂದ್ರ ಬಜೆಟ್; ಮುಂಚೂಣಿ ರಾಜ್ಯಗಳ ಆದ್ಯತೆ ಗುರುತಿಸಬೇಕು- ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ಮೈಕ್ರೋ ಫೈನಾನ್ಸ್ ಹಾವಳಿ ತಡೆಗಟ್ಟುವ ಸಂಬಂಧ ರಾಜ್ಯ ಸಚಿವ ಸಂಪುಟದಲ್ಲಿ ತೀರ್ಮಾನಿಸಿದಂತೆ ಶೀಘ್ರದಲ್ಲಿಯೇ ಸುಗ್ರೀವಾಜ್ಞೆ ಅನುಷ್ಠಾನ**

**೩. ಜಿಲ್ಲಾಸ್ಪತ್ರೆಗಳಂತೆ ರಾಜ್ಯದ ತಾಲೂಕು ಆಸ್ಪತ್ರೆಗಳು ಮೇಲ್ದರ್ಜೆಗೆ ಸರ್ಕಾರದ ಚಿಂತನೆ**

**೪. ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ; ದಾಖಲೆಗಳ ಪರಿಶೀಲನೆ**

**<><*<><>*><>**

ನಾಳೆ ಮಂಡನೆಯಾಗಲಿರುವ ಕೇಂದ್ರ ಬಜೆಟ್ ಅನ್ನು ಕರ್ನಾಟಕವೂ ಸೇರಿದಂತೆ ಅಭಿವೃದ್ಧಿ ಪಥದಲ್ಲಿ ಮುಂಚೂಣಿಯಲ್ಲಿರುವ ರಾಜ್ಯಗಳ ಆದ್ಯತೆಗಳನ್ನು ಗುರುತಿಸಿ, ಅವುಗಳಿಗೆ ಸಂಪನ್ಮೂಲ ಹಂಚಿಕೆ ವಿಚಾರದಲ್ಲಿ ಹೆಚ್ಚಿನ ಶಕ್ತಿ ತುಂಬಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ತೆರಿಗೆ ಪಾಲಿನ ಹಂಚಿಕೆಯೂ ಸೇರಿದಂತೆ ರಾಜ್ಯಗಳಿಗೆ ಸಂಪನ್ಮೂಲ ಹಂಚಿಕೆ ಮಾಡುವ ವಿಷಯದಲ್ಲಿ ವೈಜ್ಞಾನಿಕವಾದ ಮಾನದಂಡಗಳನ್ನು ಅನುಸರಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ನಗರ ಪ್ರದೇಶದಲ್ಲಿ ಮನೆ ನಿರ್ಮಾಣಕ್ಕೆ ಪ್ರಸ್ತುತ ಕೇಂದ್ರ ಸರ್ಕಾರ ನೀಡುತ್ತಿರುವ ನೆರವಿನಲ್ಲಿ ಕನಿಷ್ಠ ೫ ಲಕ್ಷಕ್ಕೆ ಹಾಗೂ ಗ್ರಾಮೀಣ ಪ್ರದೇಶದ ವಸತಿ ನಿರ್ಮಾಣಕ್ಕೆ ೩ ಲಕ್ಷ ರೂಪಾಯಿಗೆ ಹೆಚ್ಚಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಅಂಗನವಾಡಿ, ಆಶಾ ಕಾರ್ಯಕರ್ತೆಯರು ಹಾಗೂ ಅಡುಗೆ ಕೆಲಸಗಾರರ ಗೌರವಧನದಲ್ಲಿ ಕೇಂದ್ರ ಸರ್ಕಾರದ ಪಾಲನ್ನು ೫ ಸಾವಿರ ರೂಪಾಯಿಗೆ ಹೆಚ್ಚಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ.

**<><*<><>*><>**

೨೦೨೫-೨೬ನೇ ಸಾಲಿನ ಕೇಂದ್ರ ಬಜೆಟ್ ನಾಳೆ ಮಂಡನೆಯಾಗಲಿದೆ. ಕೇಂದ್ರ ಬಜೆಟ್ ಮಂಡನೆಯ ಕಾರ್ಯಕಲಾಪವನ್ನು ಕರ್ನಾಟಕದಲ್ಲಿನ ಎಲ್ಲಾ ಆಕಾಶವಾಣಿ ಕೇಂದ್ರಗಳು ನೇರ ಪ್ರಸಾರ ಮಾಡಲಿವೆ. ಈ ಹಿನ್ನೆಲೆಯಲ್ಲಿ ನಾಳೆ ಮಧ್ಯಾಹ್ನದ ರಾಷ್ಟ್ರೀಯ ವಾರ್ತೆಗಳು ೧.೧೦ರ ಬದಲಾಗಿ ೧.೫೦ಕ್ಕೆ ಪ್ರಸಾರವಾಗಲಿದೆ. ಮಧ್ಯಾಹ್ನದ ಪ್ರದೇಶ ಸಮಾಚಾರ ೨.೩೦ ರಿಂದ ೨.೪೫ರವರೆಗೆ ಪ್ರಸಾರವಾಗಲಿದೆ. ಆಕಾಶವಾಣಿ ಬೆಂಗಳೂರು ಪ್ರಾದೇಶಿಕ ಸುದ್ದಿ ವಿಭಾಗದಿಂದ ನಾಳೆ ರಾತ್ರಿ ೭.೪೫ ರಿಂದ ೮.೪೫ರ ವರೆಗೆ ಕೇಂದ್ರ ಬಜೆಟ್ ಕುರಿತ ನೇರ ಚರ್ಚೆ ಮೂಡಿಬರಲಿದೆ.

**<><*<><>*><>**

ರಾಜ್ಯದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆಗಳು ಜನರ ಕೊಳ್ಳುವ ಶಕ್ತಿಯನ್ನು ಹೆಚ್ಚಿಸಿದ್ದರಿಂದ ರಾಜ್ಯದ ಆರ್ಥಿಕ ಪರಿಸ್ಥಿತಿ ಸದೃಢವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರು ಸುತ್ತೂರಿನ ಶಿವರಾತ್ರೀಶ್ವರ ಶಿವಯೋಗಿಗಳ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಮುಖ್ಯಮಂತ್ರಿ, ಗ್ಯಾರಂಟಿ ಯೋಜನೆಗಳು ಪ್ರತಿ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಆರ್ಥಿಕ ಚಲನೆ ನೀಡಿವೆ ಎಂದರು. ಜಾತ್ಯತೀತ ಸಮಾಜ ನಿರ್ಮಾಣ ಸಂವಿಧಾನದ ಮೂಲ ಉದ್ದೇಶವಾಗಿದ್ದು, ಪ್ರತಿಯೊಬ್ಬರೂ ತಾರತಮ್ಯ ಹಾಗೂ ಮೌಢ್ಯಗಳನ್ನು ತೊರೆದು ಉತ್ತಮ ಜೀವನ ನಡೆಸಬೇಕು ಎಂದು ಅವರು ಕರೆ ನೀಡಿದರು. ಸುತ್ತೂರು ಮಠ ಶಿಕ್ಷಣ ಮತ್ತು ಅನ್ನ ದಾಸೋಹ ನಡೆಸುತ್ತಾ ಇಡೀ ಸಮಾಜದ ಆಸ್ತಿಯಾಗಿದೆ. ಜಾತ್ಯತೀತ ಮೌಲ್ಯಗಳು ಸುತ್ತೂರು ಮಠದ ಮೌಲ್ಯಗಳೂ ಆಗಿವೆ ಎಂದರು.

<><*<><>*><>

ಕೊಡಗು ಜಿಲ್ಲೆಗೆ ಪ್ರವಾಸ ಬರುವವರಿಗಾಗಿ ಎಲ್ಲಾ ಮಾಹಿತಿ ಹೊಂದಿರುವ ಪ್ರವಾಸೋದ್ಯಮ ಇಲಾಖೆಯ ಅಧಿಕೃತ ವೆಬ್‌ಸೈಟ್ exಠಿಟಂಡಿeಞಂಜಚಿgu.ಛಿom ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆಗೊಳಿಸಿದ್ದಾರೆ. ಭಾಗಮಂಡಲದಲ್ಲಿ ಸಿದ್ದರಾಮಯ್ಯ ಅವರು, ಕೊಡಗಿನ ಪ್ರವಾಸೋದ್ಯಮ ಮಾಹಿತಿಯುಳ್ಳ ವೆಬ್ ಸೈಟ್ ಬಿಡುಗಡೆಗೊಳಿಸಿದರು. ಕೊಡಗಿನ ಸುಂದರ ಪ್ರವಾಸಿ ತಾಣಗಳನ್ನು ಅತ್ಯುತ್ತಮವಾಗಿ ಪ್ರದರ್ಶಿಸಲು ಮೀಸಲಾಗಿರುವ ಸಮಗ್ರ ಆನ್‌ಲೈನ್ ವೇದಿಕೆ ಇದಾಗಿದೆ ಎಂದು ಮುಖ್ಯಮಂತ್ರಿಗಳು ಶ್ಲಾಘಿಸಿದರು. ಜಿಲ್ಲೆಗೆ ಭೇಟಿ ನೀಡುವ ಪ್ರವಾಸಿಗರಿಗೆ ಉತ್ತಮ ಗುಣಮಟ್ಟದ, ವಿಶ್ವಾಸಾರ್ಹ ಪ್ರಯಾಣ ಅನುಭವವನ್ನು ಖಚಿತಪಡಿಸಿಕೊಳ್ಳಲು ವೆಬ್‌ಸೈಟ್‌ನಲ್ಲಿ ಅಧಿಕೃತವಾಗಿ ನೋಂದಾಯಿತ ಮತ್ತು ಪ್ರಮಾಣೀಕೃತ ಹೋಂಸ್ಟೇಗಳು, ರೆಸಾರ್ಟ್‌ಗಳು, ರೆಸ್ಟೋರೆಂಟ್‌ಗಳು, ಪ್ರವಾಸಿ ಮಾರ್ಗದರ್ಶಿಗಳು, ಟ್ಯಾಕ್ಸಿ ನಿರ್ವಾಹಕರು ಮತ್ತು ಜಿಲ್ಲೆಯ ಅಧೀಕೃತ ಕಾರ್ಯ ಕ್ರಮಗಳನ್ನು ಮಾತ್ರ ಪಟ್ಟಿ ಮಾಡಲಾಗಿದೆ.

<><*<><>*><>

ಮೈಕ್ರೋ ಫೈನಾನ್ಸ್ ಹಾವಳಿ ತಡೆಗಟ್ಟುವ ಸಂಬಂಧ ಸಚಿವ ಸಂಪುಟದಲ್ಲಿ ತೀರ್ಮಾನಿಸಿದಂತೆ ಶೀಘ್ರದಲ್ಲಿಯೇ ಸುಗ್ರೀವಾಜ್ಞೆ ಅನುಷ್ಠಾನಗೊಳ್ಳಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್‌ಗಳ ಕಿರಕುಳ ತಡೆಯಲು ಅಗತ್ಯ ಕ್ರಮ ಕೈಗೊಳ್ಳಲು ಸುಗೀವಾಜ್ಞೆ ತರಲಾಗುತ್ತಿದೆ. ಸಚಿವ ಸಂಪುಟದಲ್ಲಿ ಚರ್ಚಿಸಲಾಗಿದ್ದು, ಅಗತ್ಯ ಅಂಶಗಳನ್ನು ಸೇರಿಸಿ ರಾಜ್ಯಪಾಲರಿಗೆ ಕಳುಹಿಸಲಾಗುವುದು. ಶೀಘ್ರದಲ್ಲಿಯೇ ಅನುಷ್ಠಾನಗೊಳಿಸಲಾಗುವುದು ಎಂದರು. ಈಗಾಗಲೇ ಕಾನೂನು ಇದ್ದು, ಅಗತ್ಯ ಅಂಶಗಳನ್ನು ಸೇರಿಸಿ ಹೊಸ ಕಾನೂನಿಗೆ ಜೋಡಣೆ ಮಾಡುವಂತೆ ಮುಖ್ಯಮಂತ್ರಿಗಳು ಸೂಚಿಸಿದ್ದಾರೆ. ಮೈಕ್ರೋ ಫೈನಾನ್ಸ್ ನವರು ಕಿರುಕುಳ ನೀಡುತ್ತಿರುವ ಕಾರಣಕ್ಕೆ ಕೆಲವರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದು, ಇನ್ನು ಕೆಲವರು ಊರು ಬಿಟ್ಟು ಹೋಗುತ್ತಿದ್ದಾರೆ. ಇದಕ್ಕೆ ಕಾನೂನು ತರಬೇಕಾಗಿದೆ ಎಂದು ತಿಳಿಸಿದರು.

<><*<><>*><>

'ದಯಾಮರಣ' ಭಯಸುವ ರೋಗಿಗಳಿಗಾಗಿ ಸುಪ್ರಿಂಕೋರ್ಟ್ ನಿರ್ದೇಶನವನ್ನು ಜಾರಿಗೆ ತರಲು ರಾಜ್ಯ ಆರೋಗ್ಯ ಇಲಾಖೆ, ಮಹತ್ವದ ಆದೇಶ ಹೊರಡಿಸಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಚೇತರಿಕೆಯ ಭರವಸೆಯಿಲ್ಲದೆ ಮಾರಕ ಅನಾರೋಗ್ಯದಿಂದ ಬಳಲುತ್ತಿರುವವರಿಗೆ ಅಥವಾ ರೋಗಿಯು ಇನ್ನು ಮುಂದೆ ಜೀವ ಉಳಿಸುವ ಚಿಕಿತ್ಸೆಯಿಂದ ಪ್ರಯೋಜನವಾಗದವರಿಗೆ ಇದು ಅಪಾರ ಪ್ರಯೋಜನವನ್ನು ನೀಡುತ್ತದೆ ಎಂದು ಅವರು ತಿಳಿಸಿದ್ದಾರೆ. "ಕರ್ನಾಟಕವು ಪ್ರಗತಿಪರ ರಾಜ್ಯವಾಗಿದ್ದು, ನ್ಯಾಯಯುತ ಸಮಾಜಕ್ಕಾಗಿ ಉದಾರ ಮತ್ತು ಸಮಾನ ಮೌಲ್ಯಗಳನ್ನು ಎತ್ತಿಹಿಡಿಯುವಲ್ಲಿ ಯಾವಾಗಲೂ ಮುಂಚೂಣಿಯಲ್ಲಿದ್ದೇವೆ" ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

**<><*<><>*><>**

ರಾಜ್ಯದ ತಾಲೂಕು ಆಸ್ಪತ್ರೆಗಳನ್ನು ಜಿಲ್ಲಾಸ್ಪತ್ರೆಗಳಂತೆ ಮೇಲ್ದರ್ಜೇಗೇರಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಇಂದು ರಾಮನಗರ ಜಿಲ್ಲೆಯ ಮಾಗಡಿ ತಾಲೂಕಿನ ಚಿಕ್ಕಬಾವಿ ಪ್ರಾಥಮಿಕ ಆರೋಗ್ಯ ಕೇಂದ್ರದ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ತಾಲೂಕಿನಲ್ಲಿ ಸುಮಾರು ೧೫ ಕೋಟಿ ರೂಪಾಯಿ ವೆಚ್ಚದಲ್ಲಿ ತಾಲೂಕು ಆಸ್ಪತ್ರೆ ನವೀಕರಣ, ಹೊಸ ಕಟ್ಟಡ ಉದ್ಘಾಟನೆ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳು ನಡೆಯಲಿವೆ ಎಂದರು. ಇದಕ್ಕೂ ಮುನ್ನ ಮಾಗಡಿಯ ಸಾರ್ವಜನಿಕ ಆಸ್ಪತ್ರೆಯ ವೈದ್ಯಕೀಯ ಪ್ರಯೋಗ ಶಾಲೆ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಶಾಸಕ ಎಚ್.ಸಿ. ಬಾಲಕೃಷ್ಣ, ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಲೋಕಾಯುಕ್ತ ಅಧಿಕಾರಿಗಳು ಇಂದು ರಾಜ್ಯದ ವಿವಿಧೆಡೆ ದಾಳಿ ನಡೆಸಿದ್ದಾರೆ. ಅಕ್ರಮ ಆಸ್ತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಅಧಿಕಾರಿಗಳು ಇಂದು ಏಳು ಅಧಿಕಾರಿಗಳ ನಿವಾಸ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿ, ಶೋಧ ನಡೆಸಿದ್ದಾರೆ. ಬೆಂಗಳೂರು ಮತ್ತು ಬೆಳಗಾವಿಯಲ್ಲಿ ತಲಾ ಇಬ್ಬರು ಅಧಿಕಾರಿಗಳ ಮೇಲೆ ಮತ್ತು ಚಿತ್ರದುರ್ಗ, ರಾಯಚೂರು ಮತ್ತು ಬಾಗಲಕೋಟೆಯಲ್ಲಿ ತಲಾ ಒಬ್ಬ ಅಧಿಕಾರಿಗಳ ಮೇಲೆ ದಾಳಿ ನಡೆದಿದೆ ಎಂದು ಹಿರಿಯ ಲೋಕಾಯುಕ್ತ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

**<><*<><>*><>**

ಬೆಳೆಗಾರರಿಗೆ ತರಬೇತಿ ನೀಡಲು ತರಬೇತಿ ಕೇಂದ್ರ ಸ್ಥಾಪನೆ ಮಾಡಲಾಗುವುದು ಎಂದು ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಹಾಗೂ ಶಾಸಕ ಅಬ್ಬಯ್ಯ ಪ್ರಸಾದ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಆಯೋಜಿಸಿದ್ದ ೧೩ನೇ ಒಣ ಮೆಣಸಿನಕಾಯಿ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ಬೆಳೆಗಾರರಿಗೆ ತರಬೇತಿ ನೀಡುವ ಕೇಂದ್ರ ಕೊಚ್ಚಿನ್‌ನಲ್ಲಿದೆ. ಅದೇ ತರಬೇತಿ ಕೇಂದ್ರ ತೆರೆಯಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂದರು. ಗದಗ, ಹಾವೇರಿ ಜಿಲ್ಲೆಗಳಲ್ಲಿ ಹೆಚ್ಚಾಗಿ ಮೆಣಸಿನಕಾಯಿ ಬೆಳೆಯಲಾಗುತ್ತದೆ. ರೈತರು ದೇಶದ ಬೆನ್ನೆಲುಬು, ಅವರಿಗೆ ಶಕ್ತಿ ತುಂಬಲು ಮೇಳವನ್ನು ಆಯೋಜನೆ ಮಾಡಲಾಗಿದೆ. ರೈತರ ಪರಿಸ್ಥಿತಿ ಸುಧಾರಿಸಬೇಕಿದೆ. ರೈತರು ಹೆಚ್ಚಾಗಿ ಮೇಳದಲ್ಲಿ ಪಾಲ್ಗೊಳ್ಳಬೇಕು ಎಂದು ಅವರು ತಿಳಿಸಿದರು.

**<><*<><>*><>**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮೀ ನೊಂದಣಿಯಲ್ಲಿ ಚಿತ್ರದುರ್ಗ ಜಿಲ್ಲೆ ೩ನೇ ಸ್ಥಾನದಲ್ಲಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ಹೇಳಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉಳಿದ ಗ್ಯಾರಂಟಿ

ಯೋಜನೆಗಳು ಸಹ ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನವಾಗುತ್ತಿವೆ ಎಂದರು. ನೂತನ ಕಚೇರಿಯನ್ನು ನಾಳೆ ಯೋಜನಾ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸುವರು ಎಂದು ಅವರು ತಿಳಿಸಿದರು.

**<><*<><>*><>**

ಉತ್ತರಕನ್ನಡ ಜಿಲ್ಲೆಯ ರೈತರು ಬೆಳೆಯುವ ಉತ್ಪನ್ನಗಳಿಗೆ ಗರಿಷ್ಠ ಲಾಭ ದೊರೆಯುವಂತೆ ಮಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದು ಕೃಷಿ ಮತ್ತು ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ ನೀಡಿದ್ದಾರೆ. ಕಾರವಾರದ ವಿವೀಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೈತರ ಬೆಳೆಗಳಿಗೆ ಲಾಭ ದೊರಕಿಸುವ ಉದ್ದೇಶದಿಂದ ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು ಇವುಗಳ ಬಗ್ಗೆ ಜಿಲ್ಲೆಯ ಎಲ್ಲಾ ರೈತರಿಗೆ ಅರಿವು ಮೂಡಿಸಬೇಕು ಎಂದರು.

**<><*<><>*><>**

ಚಿತ್ರದುರ್ಗದಲ್ಲಿ ಮಾರ್ಚ್ ೮ರಂದು ಲೋಕ್ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಸತ್ರ ನ್ಯಾಯಾಧೀಶ ವಾಸುದೇವ ರೋಣ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕ ಅದಾಲತ್‌ನಲ್ಲಿ ಚೆಕ್ ಅಮಾನ್ಯ ಪ್ರಕರಣ, ಕಾರ್ಮಿಕ ವಿವಾದ ಮತ್ತಿತರ ರಾಜಿಯಾಗಬಲ್ಲ ಪ್ರಕರಣಗಳನ್ನು ಸೂಕ್ತ ಮಾರ್ಗದರ್ಶನ ನೀಡಿ ಪರಿಹರಿಸಲಾಗುವುದು ಎಂದರು. ಕಳೆದ ತಿಂಗಳು ನಡೆದ ಲೋಕ ಅದಾಲತ್‌ನಲ್ಲಿ ೯೮ ಸಾವಿರದ ೪೫೨ ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿದಂತೆ ಒಟ್ಟು ೧ ಲಕ್ಷದ ೦೩ ಸಾವಿರದ ೨೨೯ ಪ್ರಕರಣಗಳನ್ನು ಬಗೆಹರಿಸಲಾಗಿದೆ ಎಂದು ತಿಳಿಸಿದರು.

**ಧ್ವನಿ- ವಾಸುದೇವ ರೋಣ)**

**<><*<><>*><>**

**ಸಂಕ್ಷಿಪ್ತ ಸುದ್ದಿಗಳು**

೧. ಹುಬ್ಬಳ್ಳಿಯಲ್ಲಿ ಆಯೋಜಿಸಿದ್ದ ರಸ್ತೆ ಸುರಕ್ಷತಾ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗ್, ಪ್ರತಿಯೊಬ್ಬರೂ ಸಂಚಾರ ನಿಯಮಗಳನ್ನು ಪಾಲಿಸಲು ಮುಂದಾಗಬೇಕು ಎಂದರು.

೨. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿಯಲ್ಲಿ ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಗೆ ರಾಜ್ಯಮಟ್ಟದ ಎರಡು ದಿನಗಳ ಪುನಶ್ಚೇತನ ಮತ್ತು ಪರೀಕ್ಷಾ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿತ್ತು.

೩. ೧೮ ವರ್ಷದೊಳಗಿನ ಯುವಕ ಯುವತಿಯರು ದ್ವಿಚಕ್ರ ವಾಹನ ಸೇರಿದಂತೆ ಯಾವುದೇ ವಾಹನ ಚಾಲನೆ ಮಾಡಿದಲ್ಲಿ ಅಂತವರಿಗೆ ಯಾವುದೇ ಕಾರಣಕ್ಕೂ ಶಾಶ್ವತವಾಗಿ ಚಾಲನಾ ಪರವಾನಗಿಯನ್ನು ನೀಡದಂತೆ

ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

೪. ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನಾ ಘಟಕ ಮತ್ತು ಯುವ ರೆಡ್ ಕ್ರಾಸ್ ಘಟಕದ ಆಶ್ರಯದಲ್ಲಿ ರಕ್ತದಾನ ಶಿಬಿರ ಜರುಗಿತು.

೫. ಉಡುಪಿ ಜಿಲ್ಲೆಯ ಅಭಿವೃದ್ಧಿ ಕಾರ್ಯಗಳಿಗೆ ಅಗತ್ಯವಿರುವ ಜಲ್ಲಿ ಹಾಗೂ ಮರಳು ಸರಳವಾಗಿ ನಿಗಧಿತ ಬೆಲೆಗೆ ಜನಸಾಮಾನ್ಯರಿಗೆ ದೊರಕುವಂತೆ ಗಣಿ ಇಲಾಖೆ ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸಬೇಕು ಎಂದು ಶಾಸಕ ಯಶ್‌ಪಾಲ್ ಎ ಸುವರ್ಣ ಸೂಚಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೭.೩೫ ಕ್ಕೆ <>*><>**